**Akashvani : Bangalore**
**Regional Bulletin In Kannada**
**01.05.2025 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**01.05.2025 / 14.30  hrs**

**<><*<><>*><>**

ಮುಖ್ಯಾಂಶಗಳು

**೧. ಕಾರ್ಮಿಕರ ದಿನಾಚರಣೆ ಹಿನ್ನೆಲೆ ; ಪೌರ ಕಾರ್ಮಿಕರಿಗೆ ಖಾಯಂ ನೇಮಕಾತಿ ಪತ್ರ ವಿತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಭಾರತವು ಶತಕೋಟಿಗೂ ಹೆಚ್ಚು ಕಥೆಗಳ ಪುಣ್ಯಭೂಮಿ : ವೇವ್ಸ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅಭಿಮತ**

**೩. ಜಾತಿಗಣತಿಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

**೪. ಮಂಗಳೂರಿನಲ್ಲಿ ಗುಂಪು ಹಲ್ಲೆ ಪ್ರಕರಣ ಗ್ರಾಮಾಂತರ ಠಾಣೆ ಇನ್ಸ್ಪೆಕ್ಟರ್ ಸಹಿತ ಮೂವರ ಅಮಾನತು.**

**<><*<><>*><>**

ಕಾರ್ಮಿಕರ ದಿನಾಚರಣೆ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರಿಗೆ ಖಾಯಂ ನೇಮಕಾತಿ ಪತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಿತರಿಸಿದರು. ಬಳಿಕ ಮಾತನಾಡಿದ ಅವರು, ಪೌರ ಕಾರ್ಮಿಕರನ್ನು ಮುಖ್ಯ ವಾಹಿನಿಗೆ ತರಬೇಕು ಎಂಬುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

ಇದೇ ವೇಳೆ ಸ್ವಚ್ಛತೆ ಎಲ್ಲರ ಜವಾಬ್ದಾರಿಯಾಗಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

**<><*<><>*><>**

ರಾಜ್ಯದ ವಿವಿಧೆಡೆ ಇಂದು ಅಂತಾರಾಷ್ಟ್ರೀಯ ಕಾರ್ಮಿಕರ ದಿನ ಆಚರಿಸಲಾಯಿತು. ಇಂದು ಅಂತಾರಾಷ್ಟ್ರೀಯ ಕಾರ್ಮಿಕರ ದಿನಾಚರಣೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಗಣ್ಯರು ನಾಡಿನ ಸಮಸ್ತ ಶ್ರಮಿಕರಿಗೆ ಶುಭ ಕೋರಿದ್ದಾರೆ.  ದುಡಿಯುವ ವರ್ಗದ ಕೊಡುಗೆ ಹಾಗೂ ತ್ಯಾಗವನ್ನು ಗೌರವಿಸುವ ಸಲುವಾಗಿ ಮೇ ದಿನಾಚರಣೆ’ ಹೆಸರಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಕಾರ್ಮಿಕ ದಿನ ಆಚರಿಸಲಾಯಿತು. ದೊಡ್ಡಬಳ್ಳಾಪುರದ ಕೈಗಾರಿಕಾ ಪ್ರದೇಶದ ವಿವಿಧ ಕಾರ್ಖಾನೆಗಳಲ್ಲಿ  ಕಾರ್ಮಿಕರ ದಿನಾಚರಣೆ ಅಂಗವಾಗಿ ಸಿಐಟಿಯು, ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳಿಂದ ಧ್ವಜಾರೋಹಣ ಕಾರ್ಯಕ್ರಮ ಹಾಗೂ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಲಾಯಿತು.   ೧೩೯ ನೇ ವಿಶ್ವ ಕಾರ್ಮಿಕರ ದಿನಾಚರಣೆ ಅಂಗವಾಗಿ ದಾವಣಗೆರೆಯಲ್ಲಿಂದು ವಿವಿಧ ಕಾರ್ಮಿಕ ಸಂಘಟನೆಗಳು ಬೃಹತ್ ಮೆರವಣಿಗೆ ನಡೆಸಿದವು. ಚಿತ್ರದುರ್ಗದಲ್ಲಿ ಹಲವು

ಕಾರ್ಮಿಕ  ಸಂಘಗಳು ಒಂದೆ ಸೂರಿನಡಿ ಕಾರ್ಮಿಕ ದಿನಾಚರಣೆಯನ್ನು ಆಚರಿಸಿದವು. ಕಾರ್ಯಕ್ರಮವನ್ನು ಕಾಮ್ರೆಡ್ ರವಿ ಮತ್ತು ಖ್ಯಾತ ನ್ಯಾಯವಾದಿ ವಿದ್ಯಾಧರ್ ಉದ್ಘಾಟಿಸಿದರು.

**<><*<><>*><>**

ವಿಶ್ವ ಶ್ರವಣ, ದೃಶ್ಯ ಮನೋರಂಜನಾ ಶೃಂಗಸಭೆ - ವೇವ್ಸ್ ಸಂಸ್ಕೃತಿ, ಸೃಜನಶೀಲತೆ ಮತ್ತು ಸಾರ್ವತ್ರಿಕ ಸಂಪರ್ಕದ ಅಲೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ಮುಂಬೈನಲ್ಲಿ ಇಂದು ಆರಂಭಗೊಂಡ ೪ ದಿನಗಳ ವೇವ್ಸ್ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ೧೦೦ಕ್ಕೂ ಹೆಚ್ಚು ದೇಶಗಳ ಕಲಾವಿದರು, ನಾವೀನ್ಯಕಾರರು, ಹೂಡಿಕೆದಾರರು ಮತ್ತು ನೀತಿ ನಿರೂಪಕರು, ಒಂದೇ ಸೂರಿನಡಿ ಒಟ್ಟು ಗೂಡಿರುವುದರಿಂದ ವೇವ್ಸ್ ಜಾಗತಿಕವಾಗಿ ಗಮನ ಸೆಳೆಯುತ್ತಿದೆ ಎಂದು ಹೇಳಿದ್ದಾರೆ. ಶತಕೋಟಿಗೂ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ಭಾರತವು, ಶತಕೋಟಿಗೂ ಹೆಚ್ಚು ಕಥೆಗಳ ಪುಣ್ಯಭೂಮಿಯಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೧ ಸೆಕೆಂಡ್‌ಗಳು)**

**<><*<><>*><>**

ಜಾತಿ ಗಣತಿಗೆ ಅನುಗುಣವಾಗಿ ಮೀಸಲಾತಿಯನ್ನು ಹೆಚ್ಚಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖಾಸಗಿ ಕ್ಷೇತ್ರದಲ್ಲಿಯೂ ಮೀಸಲಾತಿ ನೀಡುವಂತೆ ಆಗ್ರಹಿಸಿದ್ದಾರೆ. ನಿರ್ಧಿಷ್ಟ ಸಮಯದೊಳಗೆ ಕೇಂದ್ರ ಸರ್ಕಾರ ಜಾತಿಗಣತಿ ಮುಗಿಸುವಂತೆ ಸಲಹೆ ನೀಡಿದ್ದಾರೆ. ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯನ್ನು ನಡೆಸುವಂತೆ ಕೇಂದ್ರ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಇದೇ ವೇಳೆ ಕೇಂದ್ರ ಸರ್ಕಾರದ ಮೇಲೆ ಜಾತಿಗಣತಿ ನಡೆಸುವಂತೆ ಒತ್ತಡ ಹೇರಿದ್ದ ರಾಹುಲ್ ಗಾಂಧಿಯವರನ್ನು ಅವರು ಅಭಿನಂದಿಸಿದ್ದಾರೆ.

**<><*<><>*><>**

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಒತ್ತಾಯಕ್ಕೆ ಮಣಿದು ಕೇಂದ್ರ ಸರ್ಕಾರ ಜಾತಿಗಣತಿಗೆ ಮುಂದಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.  ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು  ಸಮಾಜದ ಎಲ್ಲಾ ಸಮುದಾಯಗಳಿಗೆ ನ್ಯಾಯ ಸಿಗಬೇಕು ಎಂದರೆ ಜನಸಂಖ್ಯೆಯ ಆಧಾರದ ಮೇಲೆ ದೇಶದ ಜನರಿಗೆ ಸೌಲಭ್ಯಗಳನ್ನು ನೀಡಬೇಕು ಎಂಬುದು ಕಾಂಗ್ರೆಸ್ ಪಕ್ಷದ ಆಶಯ, ಸಿದ್ಧಾಂತ, ಹಾಗೂ ಬೇಡಿಕೆಯಾಗಿದೆ ಎಂದು ಹೇಳಿದ್ದಾರೆ.  ಜಾತಿಗಣತಿಗೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಎಲ್ಲಾ ಸಹಕಾರ ನೀಡಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಜನಗಣತಿ ಜತೆಗೆ ಜಾತಿಗಣತಿ ನಡೆಸಲು ಮುಂದಾಗಿರುವ ಕೇಂದ್ರ ಸಚಿವ ಸಂಪುಟ ನಿರ್ಧಾರವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸ್ವಾಗತಿಸಿದ್ದಾರೆ.  ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ೧೯೩೧ರ ಬಳಿಕ ಜಾತಿ ಜನಗಣತಿ ನಡೆದಿರಲಿಲ್ಲ ಎಂದು ತಿಳಿಸಿದ್ದಾರೆ. ಜನಗಣತಿ ಜತೆಗೆ ಜಾತಿಗಣತಿ ನಡೆಸಲು ಕೇಂದ್ರ ಸಚಿವ ಸಂಪುಟ ಸಮ್ಮತಿ ಸೂಚಿಸಿರುವುದು ಅತ್ಯುತ್ತಮ ನಿರ್ಧಾರವಾಗಿದ್ದು, ದೇಶದ ಪ್ರತಿಯೊಬ್ಬ ನಾಗರಿಕನಿಗೂ ನ್ಯಾಯ ದೊರಕಲಿದೆ ಎಂದು ಹೇಳಿದ್ದಾರೆ.

<><*<><>*><>

ಮಂಗಳೂರಿನ ಕುಡುಪು ಎಂಬಲ್ಲಿ ಇತ್ತೀಚೆಗೆ ನಡೆದ ಗುಂಪು ಹತ್ಯೆ ಪ್ರಕರಣವನ್ನು ನಿರ್ಲಕ್ಷ್ಯಿಸಿದ ಆರೋಪದಲ್ಲಿ ಮಂಗಳೂರು ಗ್ರಾಮಾಂತರ ಠಾಣೆಯ ಇನ್ಸ್‌ಪೆಕ್ಟರ್ ಸೇರಿದಂತೆ ಮೂರು ಮಂದಿಯನ್ನು ಅಮಾನತುಗೊಳಿಸಿ ಪೊಲೀಸ್ ಆಯುಕ್ತ ಅನುಪಮ್ ಅಗರ್‌ವಾಲ್ ಆದೇಶ ಹೊರಡಿಸಿದ್ದಾರೆ. ಘಟನೆಯನ್ನು ಮೇಲಾಧಿಕಾರಿಗಳ ಗಮನಕ್ಕೆ ತಾರದಿರುವುದು ಹಾಗೂ ಪ್ರಕರಣದ ಕುರಿತಂತೆ ನಿರ್ಲಕ್ಷ್ಯ ವಹಿಸಿರುವುದರಿಂದ ಗ್ರಾಮಾಂತರ ಠಾಣೆಯ ಇನ್ಸ್‌ಪೆಕ್ಟರ್ ಶಿವಕುಮಾರ್, ಮುಖ್ಯಪೇದೆ ಚಂದ್ರ ಪಿ. ಹಾಗೂ ಪೇದೆ ಯಲ್ಲಾಲಿಂಗ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಬೆಂಬಲ ಬೆಲೆ ತೊಗರಿ ಖರೀದಿ ಅವಧಿಯನ್ನು ವಿಸ್ತರಣೆ ಮಾಡಲಾಗಿದ್ದು, ಮೇ ತಿಂಗಳ ಅಂತ್ಯದವರೆಗೆ ಖರೀದಿ ಮಾಡಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಕೇಂದ್ರ ಸರ್ಕಾರಕ್ಕೆ ಈ ಕುರಿತು ಮನವಿ ಮಾಡಲಾಗಿದ್ದು, ಒಂದು ತಿಂಗಳು ಅವಧಿ ವಿಸ್ತರಣೆ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ಹೇಳಿದ್ದಾರೆ. ಕೇಂದ್ರ ಸರ್ಕಾರ ಕನಿ? ಬೆಂಬಲ ಬೆಲೆಯಲ್ಲಿ ೩.೦೬ ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಅನುಮತಿ ನೀಡಿದ್ದು, ಇದುವರೆಗೆ ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ ೧.೮೩ ಲಕ್ಷ ಮೆಟ್ರಿಕ್ ಟನ್ ಖರೀದಿ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><*<><>*><>

ಪದವಿ ಪ್ರಮಾಣ ಪತ್ರ ಪಡೆಯುವುದರ ಜೊತೆಗೆ ವೈದ್ಯಕೀಯ ಕ್ಷೇತ್ರದಲ್ಲಿ ಪ್ರಬುದ್ಧರಾಗುವುದು ಅತಿಮುಖ್ಯ ಎಂದು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯದ ಉಪ ಕುಲಪತಿ ಡಾ. ಬಿ.ಸಿ. ಭಗವಾನ್ ಅಭಿಪ್ರಾಯಪಟ್ಟಿದ್ದಾರೆ. ಮಡಿಕೇರಿಯಲ್ಲಿ ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಘಟಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿ ವರ್ಷ ೧ ಲಕ್ಷದ ೧೫ ಸಾವಿರ ಕ್ಕೂ ಹೆಚ್ಚು ವೈದ್ಯರು ಪದವಿ ಪಡೆಯುತ್ತಿದ್ದಾರೆ. ವೈದ್ಯವೃತ್ತಿ ಎಂಬುವುದು ಕೇವಲ ಪದವಿ ಅಲ್ಲ, ಅದು ಬದ್ಧತೆ, ಔದಾರ್ಯ ಹಾಗೂ ನಿಷ್ಠೆ ಹೊಂದಿರುವ ಕ್ಷೇತ್ರವಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ರಾಜ್ಯದ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ.ಕೃಷ್ಣ ಅವರ ೯೩ನೇ ಹುಟ್ಟುಹಬ್ಬದ ನೆನಪಿಗಾಗಿ ಮಂಡ್ಯ ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಅವರ ಅಭಿಮಾನಿಗಳು ಪ್ರತಿವರ್ಷ ವಿವಿಧ ಕ್ಷೇತ್ರದ ಸಾಹಿತಿಗಳು, ಗಣ್ಯರು, ರೈತರು, ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲು ದತ್ತಿನಿಧಿಗಳನ್ನು ಸ್ಥಾಪಿಸಿದ್ದಾರೆ. ಎಸ್.ಎಂ.ಕೃಷ್ಣ ಹೆಸರಿನಲ್ಲಿ ಪ್ರತಿ ವರ್ಷ ಒಬ್ಬ ಪ್ರಗತಿಪರ ರೈತನಿಗೆ, ಸಮಾಜಮುಖಿ ಸೇವೆ ಸಲ್ಲಿಸಿದ ಒಬ್ಬರಿಗೆ, ಮೈಸೂರು ವಿಶ್ವವಿದ್ಯಾನಿಲಯ, ಕಾನೂನು ವಿಶ್ವವಿದ್ಯಾನಿಲಯ, ಚಿತ್ರಕಲಾ ಪರಿಷತ್, ಮಂಡ್ಯ ವಿಶ್ವ ವಿದ್ಯಾನಿಲಯ, ಕನ್ನಡ ಸಾಹಿತ್ಯ ಪರಿಷತ್, ರಾಮಕೃಷ್ಣ ಆಶ್ರಮ ವತಿಯಿಂದ ಆಯಾ ಸಂಸ್ಥೆಗಳು ಪ್ರಶಸ್ತಿ ನೀಡಿ ಗೌರವಿಸಲು ಸಂಬಂಧ ಪಟ್ಟ ಸಂಸ್ಥೆಗಳಿಗೆ ಡಿಮಾಂಡ್ ಡ್ರಾಫ್ಟ್ ಮುಖಾಂತರ ಠೇವಣಿಯನ್ನು ಕಳುಹಿಸಿಕೊಡಲಾಗಿದೆ.

<><*<><>*><>

೧. ಭಾರತೀಯ ಅಂಚೆ ಇಲಾಖೆಯು ೨೦೨೪-೨೫ನೇ ಅರ್ಥಿಕ ವರ್ಷದಲ್ಲಿ ಹಮ್ಮಿಕೊಂಡ ಹಲವು ಅಭಿಯಾನಗಳಲ್ಲಿ ಮತ್ತು ವಾರ್ಷಿಕ ನಿಗದಿತ ಗುರಿ ಸಾಧನೆಯಲ್ಲಿ ಬಳ್ಳಾರಿ ವಿಭಾಗವು ರಾಜ್ಯದಲ್ಲೇ ಅತಿ ಹೆಚ್ಚು ಅಂಚೆ ಉಳಿತಾಯ ಖಾತೆ ತೆರೆಯುವಲ್ಲಿ ಯಶಸ್ವಿಯಾಗಿದ್ದು, ಜಿಲ್ಲಾ ಮಟ್ಟದ ೧೭ ಬಹುಮಾನಗಳು ದೊರೆತಿವೆ.

೧. ಉತ್ತರ ಕನ್ನಡ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಆತ್ಮ ಯೋಜನೆಯಡಿ ಗುತ್ತಿಗೆ ಆಧಾರದ ಮೇಲೆ ೨೦೨೫-೨೬ ನೇ ಸಾಲಿಗೆ ಖಾಲಿ ಇರುವ ಉಪ ಯೋಜನಾ ನಿರ್ದೇಶಕರು, ತಾಲೂಕಾ ತಾಂತ್ರಿಕ ವ್ಯವಸ್ಥಾಪಕರು ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**